RNU AIR DHARWAD

NOVEMBER 18, 2026

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು:

- **ಮಹಿಳಾ ಜನಪ್ರತಿನಿಧಿಗಳು ಕೃತಕ ಬುದ್ಧಿಮತ್ತೆ (AI) ಮತ್ತು ಡಿಜಿಟಲ್ ವೇದಿಕೆಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಸ್ಪಂದಿಸಬೇಕು – ಲೋಕಸಭಾಧ್ಯಕ್ಷ ಓಂ ಬಿರ್ಲಾ ಕರೆ.**
- **ಗ್ರಾಮೀಣಾಭಿವೃದ್ಧಿ, ಗ್ರಾಮೀಣ ರಸ್ತೆಗೆ ಸಂಬಂಧಿಸಿದ 16 ಸಾವಿರ ಕೋಟಿ ರೂಪಾಯಿ ಮೊತ್ತದ 2 ಯೋಜನೆಗಳಿಗೆ ಚಾಲನೆ – ಸಚಿವ ಈಶ್ವರ ಬಿ ಖಂಡ್ರೆ.**
- **ನೀರಾವರಿ ಯೋಜನೆಗಳ ಭೂಸ್ವಾಧೀನ: ವ್ಯಾಜ್ಯಗಳ ಇತ್ಯರ್ಥದಲ್ಲಿ ವಿಳಂಬವಾದರೆ ಅಧಿಕಾರಿಗಳೇ ನೇರ ಹೊಣೆ – ಸಚಿವ ಎನ್. ಚಲುವರಾಯಸ್ವಾಮಿ.**
- **ರೋಬೊಟಿಕ್ಸ್ ಮತ್ತು ಫಿಸಿಕಲ್ ಎಐ ಕ್ಷೇತ್ರಗಳಲ್ಲಿ ಬೆಂಗಳೂರನ್ನು ಜಾಗತಿಕ ಮಟ್ಟದ ಪ್ರಮುಖ ತಂತ್ರಜ್ಞಾನ ಕೇಂದ್ರವನ್ನಾಗಿ ರೂಪಿಸುವ ಗುರಿ– ಸಚಿವ ಪ್ರಿಯಾಂಕ್ ಖರ್ಗೆ.**

ವಾರ್ತೆಗಳ ವಿವರ...

ಮಹಿಳಾ ಜನಪ್ರತಿನಿಧಿಗಳು ಕೃತಕ ಬುದ್ಧಿಮತ್ತೆ (AI) ಮತ್ತು ಡಿಜಿಟಲ್ ವೇದಿಕೆಗಳನ್ನು ಬಳಸಿಕೊಂಡು ಆಡಳಿತದಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಹೆಚ್ಚಿಸುವುದರ ಜೊತೆಗೆ ಸಾರ್ವಜನಿಕರ ಸಮಸ್ಯೆಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸಬೇಕು ಎಂದು ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಕರೆ ನೀಡಿದ್ದಾರೆ. ಬೆಂಗಳೂರಿನ ವಿಧಾನಸೌಧದಲ್ಲಿ ಆಯೋಜಿಸಲಾದ ಎರಡು ದಿನಗಳ ಮೊದಲ ಸ್ವತಂತ್ರ ಕಾಮನ್‌ವೆಲ್ತ್ ಮಹಿಳಾ ಸಂಸದೀಯರ **(CWP)** ಭಾರತ ಪ್ರಾದೇಶಿಕ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. **ಸಮ್ಮೇಳನದಲ್ಲಿ ಪಾಲ್ಗೊಂಡು ಮಾತನಾಡಿದ ವಿಧಾನಸಭೆಯ ಸಭಾಧ್ಯಕ್ಷ ಜಿ.ಎಸ್.ಪಾಟೀಲ,** ಮಹಿಳಾ ಜನಪ್ರತಿನಿಧಿಗಳಿಗೆ ಸುರಕ್ಷಿತ, ಸಮಾನ ಅವಕಾಶಗಳಿರುವ ಹಾಗೂ ಕುಟುಂಬಸ್ನೇಹಿ ಶಾಸಕಾಂಗ ವ್ಯವಸ್ಥೆ ನಿರ್ಮಾಣವಾಗಬೇಕು. ಈ ಸಮ್ಮೇಳನದಿಂದ ಹೊರಹೊಮ್ಮುವ ಸಲಹೆ ಮತ್ತು ಶಿಫಾರಸುಗಳನ್ನು ಕರ್ನಾಟಕ ವಿಧಾನಮಂಡಲದಲ್ಲಿ ಅಳವಡಿಸಿಕೊಳ್ಳಲು ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು. *'ಸುದೃಢ ಅಡಿಪಾಯ, ಬಲಿ ್ ಧ್ವನಿಗಳು: ನೂತನ ಮಹಿಳಾ ಜನಪ್ರತಿನಿಧಿಗಳಿಗೆ ಸುರಕ್ಷಿತ ಸೈಬರ್ ವಾತಾವರಣ ಮತ್ತು ಮಾರ್ಗದರ್ಶನದ ಅವಕಾಶಗಳು'* ಎಂಬ ಆಶಯದಡಿ ಸಮ್ಮೇಳನ ನಡೆಯುತ್ತಿದೆ. ಇಂದು ಅಂದರೆ ನವೆಂಬರ್ 18ರಂದು ಮಹಿಳಾ ಜನಪ್ರತಿನಿಧಿಗಳ ಸಾಮರ್ಥ್ಯ ವೃದ್ಧಿ ಮತ್ತು ಮಾರ್ಗದರ್ಶನ ಕುರಿತು ವಿಚಾರಗೋಷ್ಠಿಗಳು ನಡೆಯಲಿವೆ. ಇಂದು ರಾಜ್ಯಪಾಲರಾದ ಡಾಕ್ಟರ್ ಸುಧಾ ಯಾದವ್ ಅವರ ಸಮಾರೋಪ ಭಾ ಣದೊಂದಿಗೆ ಸಮ್ಮೇಳನ ಮುಕ್ತಾಯಗೊಳ್ಳಲಿದೆ.

<><><>

ಗ್ರಾಮೀಣಾಭಿವೃದ್ಧಿ, ಗ್ರಾಮೀಣ ರಸ್ತೆಗೆ ಸಂಬಂಧಿಸಿದ 16000 ಕೋಟಿ ರೂ. ಮೊತ್ತದ 2 ಯೋಜನೆಗಳಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇದೇ 20ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಚಾಲನೆ ನೀಡಲಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ವಿವರ ನೀಡಿದ ಅವರು, ಮುಖ್ಯಮಂತ್ರಿ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆಯಡಿ 10ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಗ್ರಾಮೀಣ ರಸ್ತೆ ಸಂಪರ್ಕ ಅಭಿವೃದ್ಧಿ ಪಡಿಸಲಾಗುತ್ತಿದ್ದರೆ, ಮುಖ್ಯಮಂತ್ರಿಗಳ ಗ್ರಾಮೀಣಾಭಿವೃದ್ಧಿ ಯೋಜನೆಯಡಿ 6000 ಕೋಟಿ ರೂ. ವೆಚ್ಚದಲ್ಲಿ ಗ್ರಾಮಗಳ ಆಂತರಿಕ ರಸ್ತೆ ಮತ್ತು ಇತರ ಕಾಮಗಾರಿಗಳನ್ನು ಅನು ಾನ ಮಾಡಲಾಗುವುದು ಎಂದೂ ತಿಳಿಸಿದರು. ಅಸ್ತಿತ್ವದಲ್ಲಿರುವ ಹಾಗೂ ಹಾಳಾಗಿರುವ ಡಾಂಬರು ರಸ್ತೆಗಳನ್ನು ಗುರುತಿಸಿ, ಅವುಗಳ ಅಭಿವೃದ್ಧಿ ಮಾಡಲು 7000 ಕೋಟಿ ರೂ. ನೀಡಲಾಗಿದೆ. ಹಾಲಿ ಪ್ರಮುಖ ಗ್ರಾಮೀಣ ರಸ್ತೆಗಳಿಗೆ ಮತ್ತೊಂದು ಪದರ (Re-Surfacing) ಡಾಂಬರು ಹಾಕಲು 3000 ಕೋಟಿ ರೂ. ಮೊತ್ತ ಒದಗಿಸಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

<><><>

ಕೈಗಾರಿಕಾ ಯೋಜನೆಗಳಿಗಾಗಿ, ಭೂಮಿ ನೀಡಿದ ರೈತರು ಹಾಗೂ ಸಂತ್ರಸ್ತ ಕುಟುಂಬಗಳಿಗೆ, ಉದ್ಯೋಗಾವಕಾಶಗಳಲ್ಲಿ ಮೊದಲ ಆದ್ಯತೆ ನೀಡಬೇಕು. ಸ್ಥಳೀಯ ಯುವಕರಿಗೆ ಕಾಯಂ ಉದ್ಯೋಗಗಳಲ್ಲಿ, ಹೆಚ್ಚಿನ ಪ್ರಾಶಸ್ತ್ಯ ನೀಡುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಕೈಗಾರಿಕಾ ಖಾತೆ ಸಚಿವರಾದ ಎಂ. ಬಿ. ಪಾಟೀಲ್ ಹೇಳಿದ್ದಾರೆ. ವಿಜಯಪುರ ಜಿಲ್ಲೆಯ ಕೊಲ್ಹಾರ ತಾಲೂಕಿನ ಮುಳವಾಡ ಕೈಗಾರಿಕಾ ಪ್ರದೇಶದಲ್ಲಿ ಖಾಸಗಿ ಪಾನೀಯ ಉತ್ಪಾದನಾ ಘಟಕ ಸ್ಥಾಪನೆಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು. ಭೂಸ್ವಾಧೀನಕ್ಕೆ ಸಂಬಂಧಿಸಿದ, ರೈತರ ಬಾಕಿ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಿ, ಅರ್ಹರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಅವರು ನಿರ್ದೇಶನ ನೀಡಿದರು.

<><><>

ಬೆಂಗಳೂರಿನ ದೇವನಹಳ್ಳಿ ಏರೋಸ್ಪೇಸ್ ಪಾರ್ಕ್ ಪ್ರದೇಶದಲ್ಲಿ ಕಾಲಿನ್ಸ್ ಏರೋಸ್ಪೇಸ್ ಕಂಪನಿಯು ದೇಶದ ಮೊದಲ ವಿಮಾನ ನಿರ್ವಹಣೆ ಮತ್ತು ದುರಸ್ತಿ (ಎಂ.ಆರ್.ಒ) ಘಟಕದ ನಿರ್ಮಾಣಕ್ಕೆ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಭೂಮಿಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, 'ಈ ಘಟಕ ನಿರ್ಮಾಣಕ್ಕೆ ಸರಕಾರವು 26 ಎಕರೆ ಜಾಗ ನೀಡಿದ್ದು, ಇಲ್ಲಿ 2,100 ನೇರ ಉದ್ಯೋಗಗಳು ಸೃಷ್ಟಿಯಾಗಲಿವೆ. ಇಲ್ಲಿ ಬರುವ ಎಂ.ಆರ್.ಒ. ಘಟಕದ ಮೂಲಕ ಕಾಲಿನ್ಸ್ ಏರೋಸ್ಪೇಸ್ ಕಂಪನಿಯು ಏ ಾ–ಪೆಸಿಫಿಕ್ ಪ್ರದೇಶದ ವಿಶಾಲ ಮಾರುಕಟ್ಟೆಯಲ್ಲಿ ತನ್ನ ಹೆಜ್ಜೆಗುರುತು ಮೂಡಿಸಲಿದೆ ಎಂದರು.

<><><>

ಶಾಲೆಗಳಲ್ಲಿ ಮಕ್ಕಳಿಗೆ ಕನ್ನಡ ಭಾ ೆಯಲ್ಲಿಯೇ ಕಲಿಕೆ ನಡೆಯಬೇಕು. ಮಕ್ಕಳಿಗೆ ಮಾತೃಭಾ ೆಗೆ ಹೆಚ್ಚು ಒತ್ತುಕೊಟ್ಟು ಗುಣಮಟ್ಟದ ಶಿಕ್ಷಣ ನೀಡಬೇಕೆಂದು ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರು ತಿಳಿಸಿದ್ದಾರೆ. ಗದಗದಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಾಲಾ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣದ ನೀಡಬೇಕು. ಒಂದೊಮ್ಮೆ ಮಕ್ಕಳ ಕಲಿಕಾ ಅವಧಿಯಲ್ಲಿ ಕಲಿಸುವ ಶಿಕ್ಷಣದ ಗುಣಮಟ್ಟ ಕಳಪೆ ಮಟ್ಟದ್ದಾದರೆ ಮಕ್ಕಳ ಅಭಿವೃದ್ಧಿ ಕುಂಠಿತಗೊಳ್ಳುತ್ತದೆ.

ಕಾಲೇಜುಗಳಲ್ಲಿನ ಉಪನ್ಯಾಸಕರಿಗೂ ಕಲಿಕಾ ತರಬೇತಿ ಅತ್ಯವಶ್ಯವಾಗಿದೆ. ಉಪನ್ಯಾಸಕರು ಸಂವಹನ ಕಲೆ ಹಾಗೂ ವಿದ್ಯಾರ್ಥಿಗಳಿಗೆ ಮನದಟ್ಟಾಗುವಂತೆ ಕಲಿಸುವ ನೈಪುಣ್ಯತೆ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

<><><>

ಸರ್ಕಾರಿ ಶಾಲೆಗಳ ಬಲವರ್ಧನೆ ಮತ್ತು ಖಾಸಗಿ ಶಾಲೆಗಳ ಪೈಪೋಟಿಯನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದ್ದು, ಮುಂದಿನ ಶೈಕ್ಷಣಿಕ ವ ರ್ಷದಿಂದ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಕನ್ನಡದ ಜೊತೆಗೆ ಆಂಗ್ಲ (ಇಂಗ್ಲಿ ಷ್) ಮಾಧ್ಯಮವನ್ನು ಒಳಗೊಂಡ ದ್ವಿಭಾ ಷಾ ಮಾಧ್ಯಮವನ್ನು (ಬೈಲಿಂಗ್ವಲ್ ಮೀಡಿಯಂ) ಜಾರಿಗೆ ತರಲು ಸಿದ್ಧತೆ ನಡೆಸಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಖಾತೆ ಸಚಿವ ಎಸ್. ಮಧು ಬಂಗಾರಪ್ಪ ಅವರು ತಿಳಿಸಿದ್ದಾರೆ. ಶಿವಮೊಗ್ಗದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಶಿಕ್ಷಣ ಇಲಾಖೆಯ ಸುಧಾರಣೆಗಳು ಹಾಗೂ ಜಿಲ್ಲೆಯ ಪ್ರಮುಖ ಅಭಿವೃದ್ಧಿ ಮತ್ತು ಭೂಹಕ್ಕು ಸಮಸ್ಯೆಗಳ ಕುರಿತು ವಿವರಿಸಿದರು. ಕರ್ನಾಟಕ ಪಬ್ಲಿಕ್ ಶಾಲೆಗಳ ಅಭಿವೃದ್ಧಿ ಮತ್ತು ಉನ್ನತೀಕರಣಕ್ಕಾಗಿ ರಾಜ್ಯ ಸರ್ಕಾರವು ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆಗಳು, ಪ್ರಾದೇಶಿಕ ಅಭಿವೃದ್ಧಿ ಮಂಡಳಿಗಳು, ಕಾರ್ಪೊರೇಟ್ ಸಂಸ್ಥೆಗಳು ಹಾಗೂ ತನ್ನದೇ ಬಜೆಟ್ ಮೂಲಕ ಬೃಹತ್ ಅನುದಾನವನ್ನು ಕ್ರೋಢೀಕರಿಸುತ್ತಿದ್ದು, ಎಡಿಬಿ ರೂ.2500 ಕೋಟಿ ನೀಡಲಿದೆ. ಸರ್ಕಾರ ಪ್ರತಿ ಶಾಲೆಗೆ ಸರಾಸರಿ ರೂ.2 ರಿಂದ 4 ಕೋಟಿ ವೆಚ್ಚ ಮಾಡಲಿದೆ ಎಂದರು. ಅಲ್ಲದೆ, ಮುಂಬರುವ ಜೂನ್ ಮಾಹೆಯಿಂದ ರಾಜ್ಯದ ಎಲ್ಲಾ 1,600 ಕೆಪಿಎಸ್ ಶಾಲೆಗಳ ಮಕ್ಕಳ ಸಾರಿಗೆ ವ್ಯವಸ್ಥೆಗಾಗಿ ಬಸ್ ಸೌಲಭ್ಯವನ್ನು ಕಲ್ಪಿಸಲಾಗುವುದು ಎಂದು ಹೇಳಿದರು.

<><><>

ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ರಾಜ್ಯದ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆಗಳನ್ನು ತ್ವರಿತಗೊಳಿಸುವ ಹಾಗೂ ದಶಕಗಳಿಂದ ನೆನೆಗುದಿಗೆ ಬಿದ್ದಿರುವ ನ್ಯಾಯಾಲಯದ ವ್ಯಾಜ್ಯಗಳನ್ನ ಶೀಘ್ರವಾಗಿ ಇತ್ಯರ್ಥಪಡಿಸುವ ನಿಟ್ಟಿನಲ್ಲಿ ಜಲಸಂಪನ್ಮೂಲ ಇಲಾಖೆ ಮಹತ್ವದ ಹೆಜ್ಜೆ ಇಟ್ಟಿದೆ. ಪ್ರಕರಣಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದರೆ ಅಥವಾ ಮೇಲ್ಮನವಿ ಸಲ್ಲಿಸುವಲ್ಲಿ ವಿಳಂಬ ಮಾಡಿದರೆ ಸಂಬಂಧಪಟ್ಟ ವಿಶೇ ಷ ಭೂಸ್ವಾಧೀನಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಜಲಸಂಪನ್ಮೂಲ ಸಚಿವರಾದ ಎನ್. ಚಲುವರಾಯಸ್ವಾಮಿ ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ. 'ಕಾವೇರಿ ನೀರಾವರಿ ನಿಗಮ ನಿಯಮಿತ'ದಡಿ ಬರುವ ವಿವಿಧ ನೀರಾವರಿ ಯೋಜನೆಗಳ ಭೂಸ್ವಾಧೀನ ಹಾಗೂ ನ್ಯಾಯಾಲಯ ಪ್ರಕರಣಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ರೈತರ ಹಾಗೂ ಸರ್ಕಾರದ ಹಿತದೃಷ್ಟಿಯಿಂದ ವ್ಯಾಜ್ಯಗಳನ್ನ ಕಡಿಮೆ ಮಾಡುವತ್ತ ಗಮನಹರಿಸುವಂತೆ ಮಹತ್ವದ ಸಲಹೆ ನೀಡಿದರು. ಭೂಮಾಲೀಕರ ಮನವೊಲಿಸಿ, ಎಕರೆಗೆ 3.00 ಲಕ್ಷ ರೂ. ದೊಳಗಿನ ಪರಿಹಾರದ ಎಲ್ಲಾ ಪ್ರಕರಣಗಳನ್ನ ಕಡ್ಡಾಯವಾಗಿ ಲೋಕ್ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕವೇ ಇತ್ಯರ್ಥಪಡಿಸಿಕೊಳ್ಳಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

<><><>

ರೋಬೊಟಿಕ್ಸ್ ಮತ್ತು ಫಿಸಿಕಲ್ ಎಐ (Physical AI) ಕ್ಷೇತ್ರಗಳಲ್ಲಿ ಬೆಂಗಳೂರನ್ನು ಜಾಗತಿಕ ಮಟ್ಟದ ಪ್ರಮುಖ ತಂತ್ರಜ್ಞಾನ ಕೇಂದ್ರವನ್ನಾಗಿ ರೂಪಿಸುವ ಉದ್ದೇಶದಿಂದ, ಬೆಂಗಳೂರು ಟೆಕ್ ಶೃಂಗಸಭೆ 2026ರಲ್ಲಿ 'ಬ್ರೇನ್ಸ್' (BRAINZ – Bengaluru Robotics & AI Innovation Zone) ಎಂಬ ಮಹತ್ವದ ನಾವೀನ್ಯತಾ ಉಪಕ್ರಮವನ್ನು ಘೋಷಿಸಲಾಗಿದೆ ಎಂದು ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವರಾದ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ಬೆಂಗಳೂರು ಟೆಕ್ ಶೃಂಗಸಭೆ 2026ರಲ್ಲಿ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಭಾರತೀಯ ವಿಜ್ಞಾನ ಸಂಸ್ಥೆಯ (IISc) ಆರ್ಟ್‌ಪಾರ್ಕ್ (ARTPARK) ಸಹಯೋಗದಲ್ಲಿ ಈ ಯೋಜನೆಯನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಒಂಬತ್ತು ಎಕರೆ ಪ್ರದೇಶದಲ್ಲಿ ರೂಪುಗೊಳ್ಳಲಿರುವ ಬ್ರೇನ್ಸ್, ರೋಬೊಟಿಕ್ಸ್, ಕೃತಕ ಬುದ್ಧಿಮತ್ತೆ ಮತ್ತು ಡೀಪ್‌ಟೆಕ್ ಕ್ಷೇತ್ರಗಳ ಸಂಶೋಧಕರು, ನವೋದ್ಯಮಿಗಳು ಹಾಗೂ ಉದ್ಯಮ ವಲಯದ ಪ್ರತಿನಿಧಿಗಳನ್ನು ಒಂದೇ ವೇದಿಕೆಗೆ ತರಲಿದೆ ಎಂದು ಅವರು ಹೇಳಿದ್ದಾರೆ. ದೇಶೀಯವಾಗಿ ರೋಬೊಟಿಕ್ಸ್ ಮತ್ತು ಎಐ ತಂತ್ರಜ್ಞಾನ ಪರಿಹಾರಗಳನ್ನು ಅಭಿವೃದ್ಧಿಪಡಿಸುವುದು, ಸಂಶೋಧನಾ ಪ್ರಯೋಗಾಲಯಗಳಲ್ಲಿ ರೂಪುಗೊಳ್ಳುವ ನಾವೀನ್ಯತೆಗಳನ್ನು ನೈಜ ಜಗತ್ತಿನ ಬಳಕೆಗೆ ತರುವುದು ಹಾಗೂ ಉದ್ಯಮಗಳ ಅಗತ್ಯಗಳಿಗೆ ಅನುಗುಣವಾಗಿ ಸುಧಾರಿತ ತಂತ್ರಜ್ಞಾನಗಳನ್ನು ರೂಪಿಸುವುದು ಈ ಉಪಕ್ರಮದ ಪ್ರಮುಖ ಉದ್ದೇಶವಾಗಿದೆ.

<><><>

ಅಂಚೆ ಜೀವ ವಿಮೆ ಮತ್ತು ಗ್ರಾಮೀಣ ಅಂಚೆ ಜೀವ ವಿಮೆ ಸೇವೆಗಳನ್ನು, ಈ ತಿಂಗಳ 24ರ ವರೆಗೆ ತಾತ್ಕಾಲಿಕವಾಗಿ ಸ್ಥಗಿತ ಗೊಳಿಸಲಾಗಿದೆ. ಹೊಸ ಇನ್ಶುರೆನ್ಸ್ ಮ್ಯಾನೇಜ್‌ಮೆಂಟ್ ಸೊಲ್ಯೂ ‘ನ್ ತಂತ್ರಾಂಶಕ್ಕೆ ವರ್ಗಾಯಿಸುವ ಕಾರ್ಯಕೈಗೊಳ್ಳಲಾಗುತ್ತಿದ್ದು, ದಿನಾಂಕ 25 ರಂದು, ಎರಡೂ ವಿಮೆ ಸೇವೆಗಳು ಪುನಾರಂಭಗೊಳ್ಳಲಿವೆ ಎಂದು, ಧಾರವಾಡ ವಿಭಾಗೀಯ, ಉಪ ಅಂಚೆ ಅಧೀಕ್ಷಕ ಪ್ರವೀಣ ಅಜಗಣ್ಣನವರ ತಿಳಿಸಿದ್ದಾರೆ.

<><><>

ಪ್ರವೀಣ ಅಜಗಣ್ಣನವರ ಧ್ವನಿ --- ಸೆಕೆಂದುಗಳು

<><><>

ಸಂಗೀತ, ಸಾಹಿತ್ಯ ಹಾಗೂ ಸಮಾಜಸೇವೆಯ ಮೂಲಕ ನಾಡಿನಾದ್ಯಂತ ಅಪಾರ ಗೌರವ ಗಳಿಸಿದ್ದ ಗಾನಯೋಗಿ ಪಂಡಿತ್ ಪುಟ್ಟರಾಜ ಗವಾಯಿಗಳಿಗೆ ಮರಣೋತ್ತರವಾಗಿ ದೇಶದ ಅತ್ಯುನ್ನತ ನಾಗರಿಕ ಗೌರವವಾದ ಭಾರತ ರತ್ನ ಪ್ರಶಸ್ತಿ ನೀಡಬೇಕು ಎಂದು ಆಗ್ರಹಿಸಿ ಗದಗದಲ್ಲಿ ಭಕ್ತರು, ರೈತರು, ಅಂಧ ಮಕ್ಕಳು ಹಾಗೂ ವಿವಿಧ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಬೃಹತ್ ಹೋರಾಟ ನಡೆಸಿದರು. ಗದಗ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ಪ್ರತಿಭಟನೆಯಲ್ಲಿ ಪಂಡಿತ್ ಪುಟ್ಟರಾಜ ಗವಾಯಿಗಳ ಸಾಮಾಜಿಕ, ಶೈಕ್ಷಣಿಕ ಹಾಗೂ ಸಂಗೀತ ಕ್ಷೇತ್ರದ ಅಮೂಲ್ಯ ಕೊಡುಗೆಗಳನ್ನು ಪ್ರತಿಭಟನಾಕಾರರು ಸ್ಮರಿಸಿದರು.

<><><>

ಭಾರತ ಸರ್ಕಾರದ 'ಪಿಎಂ–ಉ ಶ' (PM-USHA) ಯೋಜನೆಯ ಅಡಿಯಲ್ಲಿ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಸಹಯೋಗದಲ್ಲಿ, 18ನೇ ರಾಷ್ಟ್ರೀಯ ಸಮಾಜಶಾಸ್ತ್ರ ಸಮ್ಮೇಳನವನ್ನು ಇದೇ 20 ಮತ್ತು 21, 2026 ರಂದು ಬೆಳಿಗ್ಗೆ 10:00 ಗಂಟೆಗೆ ಕರ್ನಾಟಕ ವಿಶ್ವವಿದ್ಯಾಲಯದ ಸುವರ್ಣ ಮಹೋತ್ಸವ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಎರಡು ದಿನಗಳ ಈ ರಾಷ್ಟ್ರೀಯ ಸಮ್ಮೇಳನವು "ನಗರ ಭಾರತದ ಕೊಳಗೇರಿ ಪ್ರದೇಶಗಳು, ಸಾಮಾಜಿಕ ಒಳಗೊಳ್ಳುವಿಕೆ ಮತ್ತು ನ್ಯಾಯ: ನಗರ ಅಂಚಿನ ಸಮುದಾಯಗಳ ನೆಲೆಗಳು" ಎಂಬ ಮಹತ್ವದ ಸಮಕಾಲೀನ ವಿ ಷಯದ ಕುರಿತು ದೇಶದ ವಿವಿಧ ಭಾಗಗಳ ಸಮಾಜಶಾಸ್ತ್ರಜ್ಞರು, ಸಂಶೋಧಕರು, ಪ್ರಾಧ್ಯಾಪಕರು, ನೀತಿ ನಿರೂಪಕರು ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಚರ್ಚೆ ಮತ್ತು ವಿಚಾರ ವಿನಿಮಯಕ್ಕೆ ವೇದಿಕೆ ಕಲ್ಪಿಸುವುದು ಈ ಸಮ್ಮೇಳನದ ಪ್ರಮುಖ ಉದ್ದೇಶವಾಗಿದೆ.

<><><>

ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:

- **ಮಹಿಳಾ ಜನಪ್ರತಿನಿಧಿಗಳು ಕೃತಕ ಬುದ್ಧಿಮತ್ತೆ (AI) ಮತ್ತು ಡಿಜಿಟಲ್ ವೇದಿಕೆಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಸ್ಪಂದಿಸಬೇಕು – ಲೋಕಸಭಾಧ್ಯಕ್ಷ ಓಂ ಬಿರ್ಲಾ ಕರೆ.**

- **ಗ್ರಾಮೀಣಾಭಿವೃದ್ಧಿ, ಗ್ರಾಮೀಣ ರಸ್ತೆಗೆ ಸಂಬಂಧಿಸಿದ 16 ಸಾವಿರ ಕೋಟಿ ರೂಪಾಯಿ ಮೊತ್ತದ 2 ಯೋಜನೆಗಳಿಗೆ ಚಾಲನೆ – ಸಚಿವ ಈಶ್ವರ ಬಿ ಖಂಡ್ರೆ.**

- **ನೀರಾವರಿ ಯೋಜನೆಗಳ ಭೂಸ್ವಾಧೀನ: ವ್ಯಾಜ್ಯಗಳ ಇತ್ಯರ್ಥದಲ್ಲಿ ವಿಳಂಬವಾದರೆ ಅಧಿಕಾರಿಗಳೇ ನೇರ ಹೊಣೆ – ಸಚಿವ ಎನ್. ಚಲುವರಾಯಸ್ವಾಮಿ.**

- **ರೋಬೊಟಿಕ್ಸ್ ಮತ್ತು ಫಿಸಿಕಲ್ ಎಐ ಕ್ಷೇತ್ರಗಳಲ್ಲಿ ಬೆಂಗಳೂರನ್ನು ಜಾಗತಿಕ ಮಟ್ಟದ ಪ್ರಮುಖ ತಂತ್ರಜ್ಞಾನ ಕೇಂದ್ರವನ್ನಾಗಿ ರೂಪಿಸುವ ಗುರಿ– ಸಚಿವ ಪ್ರಿಯಾಂಕ್ ಖರ್ಗೆ.**

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><><><><><><><><>